<u>ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.</u>

<u>ಸಿ.ಸಿ.ನಂ.**65/2021**</u>

| | | | |
|---|---|---|---|
| ಸಾಕ್ಷಿದಾರರ ಹೆಸರು | ತಾತೆಪ್ಪ ತಳವಾರ | ಸಿಡಬ್ಲ್ಯೂ | 2 |
| ತಂದೆ ಹೆಸರು | ಫಕ್ಕೀರಪ್ಪ | ಪಿಡಬ್ಲ್ಯೂ | 1 |
| ವಯಸ್ಸು | 64 ವರ್ಷ | | |
| ಉದ್ಯೋಗ | ಕೃಷಿ | | |
| ವಾಸಸ್ಥಳ | ಇಜಾರಿಲಕಮಾಪುರ,ಹಾವೇರಿ | | |

<u>ದಿಃ **05.07.2025** ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>
<u>ಮುಖ್ಯ ವಿಚಾರಣೆಃ ಪ್ರಭಾರ ಹಿ.ಸ.ಸ.ಅಭಿಯೋಜಕರಿಂದ.</u>

**1).** ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಅದರಲ್ಲಿರುವ ಸಹಿ ತನ್ನದೇ ಎಂದು ಒಪ್ಪಿದ್ದರಿಂದ ಅದನ್ನು ನಿ.ಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು . ಅಂದಾಜು 3 ರಿಂದ 4 ವರ್ಷದ ಹಿಂದೆ ನಿ.ಪಿ-1 ಕ್ಕೆ ಹಾವೇರಿಯ ನಗರಸಭೆಯಲ್ಲಿ ಸಹಿ ಮಾಡಿದ್ದೇನೆ. ನಾನು ಸಹಿ ಮಾಡುವ ಮೊದಲು ನಿ.ಪಿ-1 ರಲ್ಲಿ ಬರೆದಂತಹ ಸಂಗತಿಗಳನ್ನು ಓದಿರುವದಿಲ್ಲ. ಪೊಲೀಸರು ನನಗೆ ನಿ.ಪಿ-1 ರಂತೆ ಘಟನಾ ಸ್ಥಳದ ಪಂಚನಾಮೆ ಬರೆಯಲು ನೋಟಿಸು ಕೊಟ್ಟು ಕರೆದಿರುವದಿಲ್ಲ. ಅದೇ ರೀತಿ ಸಾಕ್ಷಿಗೆ ಒಂದು ಪೋಟೋ ತೋರಿಸಲಾಗಿ ಅದರಲ್ಲಿ ತಾನು ಇರುವದಾಗಿ ಒಪ್ಪಿದ್ದರಿಂದ ಅದನ್ನು ನಿ.ಪಿ-2 ಎಂದು ಗುರುತಿಸಲಾಯಿತು ಮತ್ತು ಯಾವ ಕಾರಣಕ್ಕಾಗಿ ಸದರಿ ಪೋಟೋ ತೆಗೆದಿರುತ್ತಾರೆ ಎಂದು ಗೊತ್ತಿರುವದಿಲ್ಲ.

<u>**(**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು**)**</u>

<u>ಪಾಟೀ ಸವಾಲುಃ ಪ್ರಭಾರ ಹಿ.ಸ.ಸ.ಅಭಿಯೋಜಕರಿಂದ.</u>

2) ನನಗೆ ಮತ್ತು ಚಾ.ಸಾ-3 ರವಿಕುಮಾರ ಇಬ್ಬರಿಗೂ ದಿನಾಂಕಃ 06.04.2021 ನೇ ಇಸ್ವಿಯಂದು ಸಾಯಂಕಾಲ 4-00 ರಿಂದ 5-00 ಘಂಟೆಗೆ ಪೊಲೀಸರು ನನ್ನನ್ನು ಮತ್ತು ಚಾ.ಸಾ-3 ರವಿಕುಮಾರ ಇಬ್ಬರನ್ನೂ ಘಟನಾ ಸ್ಥಳಕ್ಕೆ ಕರೆಯಿಸಿ ಚಾ.ಸಾ-1 ಇವರು ತೋರಿಸಿದ ಘಟನಾ ಸ್ಥಳದ ಪ್ರಕಾರ ನಿ.ಪಿ-1 ಘಟನಾ ಸ್ಥಳದ ಪಂಚನಾಮೆ ಮಾಡಿದ್ದಾರೆ ಅಂದರೆ ಸರಿಯಲ್ಲ. ಅದೇ ಕಾಲಕ್ಕೆ ಘಟನಾ ಸ್ಥಳದಲ್ಲಿ ನಿ.ಪಿ-2 ಪೋಟೋ ತೆಗೆದಿರುತ್ತಾರೆ ಅಂದರೆ ಸರಿಯಲ್ಲ. ಈ ಎಲ್ಲ ವಿಷಯ

ಗೊತ್ತಿದ್ದರೂ, ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ.ಎನ್.ಜಿ.ಹೆಚ್ ವಕೀಲರಿಂದಃ ಆರೋಪಿ ಪರವಾಗಿ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.</u>

<u>ಮರು ವಿಚಾರಣೆ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.